RNU AIR DHARWAD

## March 14, 2024
## ALL INDIA RADIO- DHARWAD
## PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಪೌರತ್ವ ತಿದ್ದುಪಡಿ ಕಾಯ್ದೆ ಜಾರಿ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚಿಸಿ, ತೀರ್ಮಾನ–ಮುಖ್ಯಮಂತ್ರಿ ಸಿದ್ದರಾಮಯ್ಯ.
- ಇನ್ನು 6 ತಿಂಗಳೊಳಗೆ ಇಲಾಖೆಯಲ್ಲಿ 364 ಸರ್ವೇಯರ್‌ಗಳ ನೇಮಕಾತಿ–ಕಂದಾಯ ಸಚಿವ ಕೃಷ್ಣ ಬೈರೇಗೌಡ.
- ಕನಿಷ್ಠ ಬೆಂಬಲ ಬೆಲೆ ವ್ಯಾಪ್ತಿಗೆ ಮೆಣಸಿನಕಾಯಿ ಬೆಳೆ ಸೇರ್ಪಡೆ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ–ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ.
- ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದಿಂದ ಹಲವು ಯೋಜನೆಗಳು ಜಾರಿ– ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ.

ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ ಜಾರಿ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚಿಸಿ ಬಳಿಕ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಉಡುಪಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೌರತ್ವ ತಿದ್ದುಪಡಿ ಕಾಯ್ದೆಯನ್ನು ಚುನಾವಣಾ ಕಾರಣಕ್ಕಾಗಿ ಕೇಂದ್ರ ಜಾರಿ ಮಾಡಿದೆ. ರಾಜ್ಯದಲ್ಲಿ ಇದನ್ನು ಅಳವಡಿಸಿಕೊಳ್ಳುವ ಬಗ್ಗೆ ಗುರುವಾರ ಅಂದರೆ ಇಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳಿದರು.

*******

ಬೆಲೆ ಏರಿಕೆ ಸೇರಿದಂತೆ ವಿವಿಧ ಸಮಸ್ಯೆಗಳಿಂದ ಸಂಕಷ್ಟಕ್ಕೆ ಸಿಲುಕಿರುವ ರಾಜ್ಯದ ಜನರಿಗೆ ಆರ್ಥಿಕ ಬಲ ನೀಡಲು ಪಂಚ ಖಾತರಿ ಜಾರಿ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಉಡುಪಿಯಲ್ಲಿ ನಿನ್ನೆ ರಾಜ್ಯ ಸರ್ಕಾರದ ಪಂಚ ಖಾತರಿ ಯೋಜನೆಗಳ ಫಲಾನುಭವಿಗಳ ಸಮಾವೇಶ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದ ಅವರು, ರಾಜ್ಯದಲ್ಲಿ ಪಂಚ ಖಾತರಿ ಯೋಜನೆಗಳು ಜಾರಿಯಾದ ನಂತರ ಕೋಟ್ಯಂತರ ಜನರಿಗೆ ಅನುಕೂಲವಾಗಿದೆ. ಉಡುಪಿ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 87 ಲಕ್ಷ ಮಹಿಳೆಯರು, ಗೃಹಜ್ಯೋತಿ ಯೋಜನೆಯಡಿ, 3 ಲಕ್ಷದ 11 ಸಾವಿರದ 652 ಮಂದಿ ಲಾಭ ಪಡೆದಿದ್ದು, 114 ಕೋಟಿ ರೂಪಾಯಿ ವೆಚ್ಚವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

*******

ಇಲಾಖೆಯಲ್ಲಿ 364 ಸರ್ವೇಯರ್‌ಗಳ ನೇಮಕಾತಿಗೆ ಸರ್ಕಾರ ಒಪ್ಪಿಗೆ ನೀಡಿದ್ದು, ಇನ್ನು 6 ತಿಂಗಳೊಳಗೆ ನೇಮಕಾತಿ ನಡೆಯಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಹೊಸದಾಗಿ ಆಯ್ಕೆಯಾದ 991 ಭೂಮಾಪಕರುಗಳಿಗೆ ಪರವಾನಗಿ ಪ್ರಮಾಣಪತ್ರ ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತಾನಾಡಿದ ಅವರು, 27 ಭೂದಾಖಲೆ ಸಹಾಯಕ ನಿರ್ದೇಶಕರ ಹುದ್ದೆಗಳ ಆಯ್ಕೆಗೆ ಅರ್ಜಿ ಕರೆಯಲಾಗಿದೆ. 541 ಸರ್ವೇಯರ್‌ಗಳ ನೇರ ನೇಮಕಾತಿಗೆ ಸಹ ಸರ್ಕಾರ ಸಕರಾತ್ಮಕವಾಗಿ ಸ್ಪಂದಿಸಿದ್ದು, 500 ಸರ್ವೇಯರ್‌ಗಳ ಹೆಚ್ಚುವರಿ ಹುದ್ದೆಗಳಿಗೆ ಸಹ ಬೇಡಿಕೆ ಇಡಲಾಗಿದೆ ಎಂದರು.

ಕಂದಾಯ ಇಲಾಖೆಯಲ್ಲಿ ತಂತ್ರಜ್ಞಾನ ಆಧಾರಿತ ಆನ್ಲೈನ್ ಸೇವೆಗಳನ್ನು ಒದಗಿಸಿ, ಜನರನ್ನು ಕಚೇರಿಗಳಿಗೆ ಭೇಟಿ ಮಾಡುವುದರಿಂದ ಮುಕ್ತಿಗೊಳಿಸುವುದು ಸರ್ಕಾರದ ಉದ್ದೇಶ ಎಂದು ಸಚಿವರು ಹೇಳಿದರು.

*******

ಕನಿಷ್ಠ ಬೆಂಬಲ ಬೆಲೆ ವ್ಯಾಪ್ತಿಗೆ ಮೆಣಸಿನಕಾಯಿ ಬೆಳೆ ಸೇರ್ಪಡೆ ಕುರಿತಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ.

ಹಾವೇರಿ ಜಿಲ್ಲೆ ಬ್ಯಾಡಗಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಣಸಿನಕಾಯಿ ಬೆಳೆ ಶೇಖರಣೆಗೆ ಬ್ಯಾಡಗಿ ಎಪಿಎಂಸಿ ಮಾರುಕಟ್ಟೆಯಲ್ಲಿ ಕೋಲ್ಡ್ ಸ್ಟೋರೇಜ್ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗಿದೆ. ಈಗಾಗಲೇ ರಾಜ್ಯ ಸರ್ಕಾರ ರಾಜ್ಯಾದ್ಯಂತ 12 ಕೋಲ್ಡ್ ಸ್ಟೋರೇಜ್ ಗಳನ್ನು ಹಾಗೂ ಎಪಿಎಂಸಿ ವತಿಯಿಂದ 7 ಕೋಲ್ಡ್ ಸ್ಟೋರೇಜ್ ಗಳನ್ನು ಸ್ಥಾಪಿಸಲಿದೆ. ಅಗತ್ಯ ಬಿದ್ದಲ್ಲಿ ಹೆಚ್ಚು ಕೋಲ್ಡ್ ಸ್ಟೋರೇಜ್‌ಗಳನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆ ವಿಸ್ತರಣೆಗೆ 40 ಎಕರೆ ಜಮೀನು ಅಗತ್ಯವಿದ್ದು, ರೈತರು ಭೂಮಿ ನೀಡಲು ಮುಂದೆ ಬಂದರೆ ಸರ್ಕಾರದಿಂದ ಸೂಕ್ತ ಪರಹಾರ ನೀಡಿ ಜಮೀನು ಖರೀದಿಸಿ ಮಾರುಕಟ್ಟೆ ವಿಸ್ತರಣೆ ಮಾಡಲಾಗುವುದು ಎಂದು ಸಚಿವರು ಹೇಳಿದರು.

*******

ಸರ್ಕಾರ ರಚನೆ ಪೂರ್ವದಲ್ಲಿ ನೀಡಲಾಗಿದ್ದ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದ್ದು, ಸರ್ಕಾರ ನುಡಿದಂತೆ ನಡೆದು ತನ್ನ ಮಾತನ್ನು ಉಳಿಸಿಕೊಂಡಿದೆ. ಇನ್ನು ಮುಂದೆ ಅಭಿವೃದ್ಧಿ ಕೆಲಸಗಳು ವೇಗ ಪಡೆದುಕೊಳ್ಳಲಿವೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕಿನ ನೂತನ ಆಡಳಿತ ಸೌಧ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಜನರನ್ನು ಕಚೇರಿಯಿಂದ ಕಚೇರಿಗೆ ಅಲೆಸದೇ ಒಂದೇ ಸೂರಿನಡಿ ಅವರ ಸಮಸ್ಯೆಗಳನ್ನು ಬಗೆಹರಿಸುವ ಉದ್ದೇಶದಿಂದ ಆಡಳಿತ ಸೌಧ ನಿರ್ಮಿಸಲಾಗಿದ್ದು, ಅಧಿಕಾರಿಗಳು ಜನರ ಅಹವಾಲುಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದರು.

*******

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆಯಡಿ ಶಾಲಾ ಕಟ್ಟಡಗಳ ನಿರ್ಮಾಣ ಹಾಗೂ ಮೂಲ ಸೌಕರ್ಯಗಳಿಗೆ ಸರ್ಕಾರ ಒತ್ತು ನೀಡುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಸ್ಥಳೀಯ ಶಾಸಕರ ಅನುದಾನದಡಿ ವಿಕಲಚೇತನರಿಗೆ ದ್ವಿಚಕ್ರ ವಾಹನ ವಿತರಣೆ ಹಾಗೂ ತಾಲ್ಲೂಕು ಪಂಚಾಯಿತಿ ವತಿಯಿಂದ ಶಾಲೆಗಳಿಗೆ ಪೀಠೋಪಕರಣಗಳನ್ನು ವಿತರಿಸಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮದ ಯಶಸ್ಸಿನಿಂದಾಗಿ ಇಂದು ವಿಕಲ ಚೇತನರ ಪ್ರಮಾಣ ಕಡಿಮೆಯಾಗುತ್ತಿದ್ದು, ಇದು ಶೂನ್ಯಕ್ಕೆ ಬರಬೇಕು ಎಂದು ಸಚಿವರು ಹೇಳಿದರು.

*******

ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ವಿಜಯಪುರದ ಕೃಷಿ ಮಹಾವಿದ್ಯಾಲಯ ಆವರಣದಲ್ಲಿ 85 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ರೈತರ ವಸತಿ ನಿಲಯ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ರೈತರು ಬೆಳೆದ ಬೆಳೆಗಳನ್ನು ಸಂಸ್ಕರಿಸಿ,

ಮೌಲ್ಯವರ್ಧನೆಗೊಳಿಸಿ ವ್ಯಾಪಾರಕ್ಕೆ ಉತ್ತೇಜನ ನೀಡಿದರೆ ಆದಾಯ ದ್ವಿಗುಣವಾಗುವಾದರೊಂದಿಗೆ ರೈತರ ಬದುಕು ಹಸನಾಗುತ್ತದೆ ಎಂದು ಸಚಿವರು ಹೇಳಿದರು.

*******

ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ವಿಪರೀತವಾಗಿದ್ದರೂ ಅದರ ನಿವಾರಣೆಗೆ ಸರ್ಕಾರ ಯಾವುದೇ ಪರ್ಯಾಯ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್. ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯ ಸರ್ಕಾರ ನೇಕಾರರು ಮೀನುಗಾರರ ಸಮಸ್ಯೆಗಳ ಬಗ್ಗೆ ಕಾಳಜಿ ತೋರುತ್ತಿಲ್ಲ. ರಾಜ್ಯದಲ್ಲಿ ಹಲವು ಸಮಸ್ಯೆಗಳು ತಾಂಡವವಾಡುತ್ತಿದ್ದರೂ, ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಸರ್ಕಾರ ದೊಡ್ಡ ದೊಡ್ಡ ಸಮಾವೇಶಗಳನ್ನು ಮಾಡಿ ತೆರಿಗೆ ಹಣ ಪೋಲುಮಾಡುತ್ತಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ಹೊರಹಾಕಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ರಾಜ್ಯ ಸರ್ಕಾರದ ಸಾಧನೆ ಮತ್ತು ಸಂಬಂಧಿತ ದಾಖಲೆಗಳನ್ನು ಅಧಿಕೃತವಾಗಿ ಮಾಧ್ಯಮಗಳಿಗೆ ಹಂಚಿಕೊಳ್ಳಲು 5 ಮಂದಿ ಸಚಿವರನ್ನು ರಾಜ್ಯ ಸರ್ಕಾರದ ವಕ್ತಾರರನ್ನಾಗಿ ನೇಮಕ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದಾರೆ.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಹಾಗೂ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನು ರಾಜ್ಯ ಸರ್ಕಾರದ ಅಧಿಕೃತ ವಕ್ತಾರರನ್ನಾಗಿ ನೇಮಕ ಮಾಡಲಾಗಿದೆ.

ಎಲ್ಲ ಇಲಾಖೆಯ ಮುಖ್ಯಸ್ಥರು ತಮ್ಮ ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಸಾಧನೆಗಳ ವಿವರಗಳನ್ನು ಈ ಸಚಿವರಿಗೆ ನೀಡುವಂತೆ ಅಧಿಕೃತ ಆದೇಶದಲ್ಲಿ ತಿಳಿಸಲಾಗಿದೆ.

*******

ಮುಂಬರುವ ಲೋಕಸಭಾ ಚುನಾವಣೆಗೆ ಕರ್ನಾಟಕದ20 ಕ್ಷೇತ್ರಗಳು ಸೇರಿದಂತೆ 72 ಅಭ್ಯರ್ಥಿಗಳ 2ನೇ ಪಟ್ಟಿಯನ್ನು ಭಾರತೀಯ ಜನತಾ ಪಕ್ಷ ನಿನ್ನೆ ಬಿಡುಗಡೆ ಮಾಡಿದೆ.

ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ, 20 ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು ಬಿಜೆಪಿ ಪ್ರಕಟಿಸಿದ್ದು, ಈ ಬಾರಿ 9 ಹೊಸ ಮುಖಗಳಿಗೆ ಅವಕಾಶ ನೀಡಲಾಗಿದೆ. ಹಾಲಿ ಸಂಸದರಾದ ಸಂಗಣ್ಣ ಕರಡಿ, ವೈ.ದೇವೇಂದ್ರಪ್ಪ, ಶಿವಕುಮಾರ್ ಉದಾಸಿ, ಜಿ.ಎಂ.ಸಿದ್ದೇಶ್ವರ್, ನಳಿನ್‌ಕುಮಾರ್ ಕಟೀಲ್, ಪ್ರತಾಪ್ ಸಿಂಹ, ವಿ.ಶ್ರೀನಿವಾಸ್ ಪ್ರಸಾದ್, ಡಿ.ವಿ.ಸದಾನಂದಗೌಡ, ಜಿ.ಎಸ್.ಬಸವರಾಜು ಅವರಿಗೆ ಟಿಕೆಟ್ ನಿರಾಕರಿಸಲಾಗಿದೆ.

*******

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಗಡಿ ಆಯೋಗದ ಕಚೇರಿ ಸ್ಥಾಪಿಸಲಾಗುವುದು ಎಂದು ಕರ್ನಾಟಕ ಗಡಿ ಮತ್ತು ನದಿಗಳ ಸಂರಕ್ಷಣಾ ಆಯೋಗದ ಅಧ್ಯಕ್ಷ ಶಿವರಾಜ್ ಪಾಟೀಲ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಿನ್ನೆ ಕರ್ನಾಟಕ ಗಡಿ ಮತ್ತು ನದಿಗಳ ರಕ್ಷಣಾ ಆಯೋಗದ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರ, ಕನ್ನಡಪರ ಸಂಘಟನೆಗಳ ಬೇಡಿಕೆ, ಗಡಿ ಹಾಗೂ ನದಿಗಳ ರಕ್ಷಣೆಗೆ ಸಂಬಂಧಿಸಿದಂತೆ ಸ್ಥಳಿಯ ಸಮಸ್ಯೆಗಳು ಮತ್ತು ಅಹವಾಲುಗಳನ್ನು ಸ್ವೀಕರಿಸಲು ಅನುಕೂಲವಾಗುವಂತೆ ಕಚೇರಿ ಸ್ಥಾಪನೆ ಚಿಂತನೆ ಇದೆ ಎಂದರು.

ಗಡಿ ಮತ್ತು ನದಿಗಳ ಆಯೋಗಕ್ಕೆ ಸುವರ್ಣ ವಿಧಾನಸೌಧದಲ್ಲಿ ಎರಡು ಕೊಠಡಿಗಳನ್ನು ನೀಡುವುದಾಗಿ ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಶೀಘ್ರವೇ ಸುವರ್ಣ ಸೌಧದಲ್ಲಿ ಕಚೇರಿ ಸ್ಥಾಪಿಸಿ, ಆಯೋಗದ ಸ್ಥಳೀಯ ಸದಸ್ಯರೊಬ್ಬರನ್ನು ನಿಯೋಜಿಸಲಾಗುವುದು ಎಂದು ಶಿವರಾಜ ಪಾಟೀಲ ತಿಳಿಸಿದರು.

*******

ಸರ್ಕಾರಿ, ಅರಣ್ಯ ಹಾಗೂ ಖಾಸಗಿ ಪ್ರದೇಶಗಳಲ್ಲಿ ವಾಸಿಸುವ ಹಾಡಿ, ಹಟ್ಟಿ ತಾಂಡಾಗಳ ನಿವಾಸಿಗಳ ಜಾಗವನ್ನು ಸಕ್ರಮಗೊಳಿಸಿ ತಾಂಡಾ ವಾಸಿಗಳಿಗೆ ಪಟ್ಟಾ ನೀಡಲಾಗುವುದು ಎಂದು ವಿಧಾನಸಭೆ ಉಪಸಭಾಪತಿ ರುದ್ರಪ್ಪ ಲಮಾಣಿ ಹೇಳಿದ್ದಾರೆ.

ಹಾವೇರಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಎಲ್ಲಾ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು. ಮೊದಲ ಹಂತದಲ್ಲಿ ಹಾವೇರಿ ಜಿಲ್ಲೆಯ ಚಿಕ್ಕಮಳ್ಳಿ ತಾಂಡಾ ಆಯ್ಕೆ ಮಾಡಲಾಗಿದೆ. ಈಗಾಗಲೇ ಕಂದಾಯ ಸಚಿವರಾದ ಕೃಷ್ಣಬೈರೇಗೌಡ ಅವರು ತಾಂಡಾವಾಸಿಗಳಿಗೆ ಪಟ್ಟಾ ನೀಡುವ ಕಾರ್ಯ ಆರಂಭಿಸಿದ್ದಾರೆ ಎಂದು ತಿಳಿಸಿದರು.

*******

ಬೆಂಗಳೂರಿನ ಖಾಸಗಿ ಕೆಫೆಯಲ್ಲಿ ಇತ್ತೀಚಿಗೆ ಸಂಭವಿಸಿದ ಬಾಂಬ್ ಸ್ಫೋಟ ಪ್ರಕಟರಣಕ್ಕೆ ಸಂಬಂಧಿಸಿದಂತೆ ಬಳ್ಳಾರಿಯಲ್ಲಿ ಓರ್ವನನ್ನು ಎನ್‌ಐಎ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಶಬ್ಬಿರ್ ಎನ್ನುವ ವ್ಯಕ್ತಿಯನ್ನು ವಶಕ್ಕೆ ಪಡೆದಿರುವ ಎನ್‌ಐಎ ಅಧಿಕಾರಿಗಳು ಹೆಚ್ಚಿನ ವಿಚಾರಣೆಗೆ ಬೆಂಗಳೂರಿಗೆ ಕರೆದೊಯ್ದಿದ್ದಾರೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಪೌರತ್ವ ತಿದ್ದುಪಡಿ ಕಾಯ್ದೆ ಜಾರಿ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚಿಸಿ, ತೀರ್ಮಾನ–ಮುಖ್ಯಮಂತ್ರಿ ಸಿದ್ದರಾಮಯ್ಯ.**

**ಇನ್ನು 6 ತಿಂಗಳೊಳಗೆ ಇಲಾಖೆಯಲ್ಲಿ 364 ಸರ್ವೇಯರ್‌ಗಳ ನೇಮಕಾತಿ–ಕಂದಾಯ ಸಚಿವ ಕೃಷ್ಣ ಬೈರೇಗೌಡ.**

**ಕನಿಷ್ಠ ಬೆಂಬಲ ಬೆಲೆ ವ್ಯಾಪ್ತಿಗೆ ಮೆಣಸಿನಕಾಯಿ ಬೆಳೆ ಸೇರ್ಪಡೆ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ–ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ.**

**ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದಿಂದ ಹಲವು ಯೋಜನೆಗಳು ಜಾರಿ– ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ**

******